**2 ನೇ ಹೆಚ್ಚುವರಿ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಡಾಧಿಕಾರಿಗಳ ನ್ಯಾಯಾಲಯ, ಹೆಚ್ ಡಿ ಕೋಟೆ**

**ಸಿ.ಸಿ ನಂ. 416/2015**

**ಸಿ.ಡಬ್ಲ್ಯೂ- 11 ಪಿ.ಡಬ್ಲ್ಯೂ- 6**

ಸಾಕ್ಷಿದಾರರ ಹೆಸರು : ನಂದಿನಿ

ತಂದೆಯ ಹೆಸರು : ಮಹದೇವಯ್ಯ

ವಯಸ್ಸು : 53

ಉದ್ಯೋಗ : ಶಿಕ್ಷಕರು

ವಾಸ ಸ್ಥಳ : ಹೆಚ್.ಡಿ. ಕೋಟೆ

**ದಿನಾಂಕ 20.09.2024 ರಂದು ಸಾಕ್ಷಿಗೆ ಪ್ರಮಾಣ ಭೋಧಿಸಲಾಯಿತು.**

**ಮುಖ್ಯ ವಿಚಾರಣೆ:- ಸ.ಸ. ಅ ರವರಿಂದಃ**

2014 ನೇ ಸಾಲಿನಲ್ಲಿ ಅಲ್ಪ ಸಂಖ್ಯಾತರ ಛಾಪ ಕಾಗದ ನಕಲು ಮಾಡಲಾಗಿದೆ ಎಂದು 119 ಛಾಪ ಕಾಗದಗಳಲ್ಲಿ ಸುಮಾರು 20 ಛಾಪ ಕಾಗದಗಳನ್ನು ಪೋಲೀಸಿನವರು ಅಮಾನತ್ತುಪಡಿಸಿಕೊಂಡಿರುತ್ತಾರೆ. ಈ ವಿಚಾರವಾಗಿ ಪೋಲೀಸರ ಮುಂದೆ ಹೇಳಿಕೆ ಕೊಟ್ಟಿರುವುದಿಲ್ಲ. ಸಾಕ್ಷಿ ಅಲ್ಲಗಳೆದ ಹೇಳಿಕೆ ಭಾಗವನ್ನು ನಿಪಿ 7 ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಮಾನ್ಯ ಅಭಿಯೋಜಕರು ಪಾಟೀ ಸವಾಲಿಗೆ ಅನುಮತಿ ಕೋರಿದ್ದು, ನೀಡಲಾಯಿತು.)**

**<u>ಪಾಟೀ ಸವಾಲು ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ</u>**

ಸುಮಾರು 27 ವಿದ್ಯಾರ್ಥಿಗಳ ದಾಖಲಾತಿಗಳು ಅಂದರೆ ವಿದ್ಯಾರ್ಥಿ ವೇತನದ ಅರ್ಜಿ, ಛಾಪ ಕಾಗದಗಳನ್ನು ಹಾಜರುಪಡಿಸಿರುತ್ತೆನೆ ಎಂದರೆ ಸರಿ. ಈ ವಿಚಾರವಾಗಿ ಹೇಳಿಕೆ ಕೊಟ್ಟಿರುತ್ತೇನೆ ಎಂದರೆ ಸರಿ.

**<u>ಪಾಟೀ ಸವಾಲು ಆರೋಪಿತರ ಪರ ವಕೀಲರಿಂದಃ-</u>**

ಸದರಿ ದಾಖಲಾತಿಗಳನ್ನು ನಾನು ಪೋಲೀಸ್ ಠಾಣೆಗೆ ಹೋಗಿ ಹಾಜರುಪಡಿಸಿಲ್ಲ ಎಂದರೆ ಸರಿ. ನನ್ನ ಸಮಕ್ಷಮ ಮಹಜರ್ ಮಾಡಿ ಸಹಿ ಪಡೆದುಕೊಂಡಿರುವುದಿಲ್ಲ. ನಾನು ತನಿಖಾಧಿಕಾರಿಗಳ ಮುಂದೆ ಹಾಜರಾಗಿ ಹೇಳಿಕೆ ನೀಡಿಲ್ಲ.

**<u>ಮರು ವಿಚಾರಣೆ ಇಲ್ಲ.</u>**

(ತೆರೆದ ನ್ಯಾ. ದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಗಣಕೀಕರಣಗೊಳಿಸಲಾಯಿತು)

2 ನೇ ಹೆಚ್ಚುವರಿ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ. ದಂಡಾಧಿಕಾರಿಗಳು, ಹೆಚ್.ಡಿ. ಕೋಟೆ.